## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಅಧ್ಯಕ್ಷರು, ಮೈಸೂರು ಜಿಲ್ಲಾ ಪಂಚಾಯತ್ ಇವರ ಉಪಯೋಗಕ್ಕಾಗಿ ಹೊಸ ವಾಹನ ಖರೀದಿಸಲು ಅನುಮತಿ ನೀಡುವ ಬಗ್ಗೆ.

ಓದಲಾಗಿದೆ: 1) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಮೈಸೂರು ಇವರ ಪತ್ರ ಸಂಖ್ಯೆ; ಎಡಿಎಂ (1)/137/2010-11 ದಿನಾಂಕ 20.11.2014. ,
2)ಸರ್ಕಾರಿ ಆದೇಶ ಸಂ. ಗ್ರಾಅಪ 385 ಕೆಎಸ್ಎಸ್ 2014 ದಿನಾಂಕ 22.01.2015.
3)ದಿನಾಂಕ 12.2.2015ರ ತಿದ್ದುಪಡಿ ಸಂಖ್ಯೆ: ಗ್ರಾಅಪ 385 ಅಆಸಿ 2014

:-:

**ಪ್ರಸ್ತಾವನೆ:**

ಮೇಲೆ (2) ರಲ್ಲಿ ಓದಲಾದ ದಿನಾಂಕ 22.01.2015ರ ಸರ್ಕಾರಿ ಆದೇಶ ಸಹವಾಚನ ಮೇಲೆ (3) ರಲ್ಲಿ ಓದಲಾದ ದಿನಾಂಕ 12.2.2015ರ ತಿದ್ದುಪಡಿಯಲ್ಲಿ ಅಧ್ಯಕ್ಷರು, ಜಿಲ್ಲಾ ಪಂಚಾಯಿತಿ ಮೈಸೂರು ಇವರ ಉಪಯೋಗಕ್ಕಾಗಿ ಅವರು ಬಳಸುತ್ತಿರುವ ವಾಹನ ಸಂಖ್ಯೆ: ಕೆಎ 09 ಜಿ 227 ಅನುಪಯುಕ್ತವಾಗಿರುವ ಕಾರಣ ರೂ. 6.50 ಲಕ್ಷಗಳ ಮಿತಿಯೊಳಗೆ ಹೊಸ ವಾಹನ ಖರೀದಿಸಲು ಅನುಮೋದನೆ ನೀಡಲಾಗಿತ್ತು. ಈ ಹಿಂದೆ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಮೈಸೂರು ಇವರು ಅಧ್ಯಕ್ಷರ ಉಪಯೋಗಕ್ಕಾಗಿ ಹಳೆಯ ವಾಹನದ ಬದಲಾಗಿ ಹೊಸ ಟೊಯೋಟಾ ಇನ್ನೋವಾ ಕಾರನ್ನು ಖರೀದಿಸಲು ಹಾಗೂ ಸದರಿ ವೆಚ್ಚವನ್ನು ಜಿಲ್ಲಾ ಪಂಚಾಯತ್ ಲೆಕ್ಕ ಶೀರ್ಷಿಕೆ 2059-00-101-0-29-200 ರ ಅಡಿಯಲ್ಲಿ ಭರಿಸಲು ಸರ್ಕಾರದ ಅನುಮತಿಯನ್ನು ಕೋರಿರುತ್ತಾರೆ.

ಈಗಾಗಲೇ ಮೇಲೆ (2) ರಲ್ಲಿ ಓದಲಾದ ದಿನಾಂಕ 22.1.2015ರ ಆದೇಶದ ಮುಂದುವರಿಕೆಯಲ್ಲಿ ಮೈಸೂರು ಜಿಲ್ಲಾ ಪಂಚಾಯತ್ ಅಧ್ಯಕ್ಷರ ಉಪಯೋಗಕ್ಕೆ ಹೊಸ ಟೊಯೋಟಾ ಇನ್ನೋವಾ ಕಾರನ್ನು ಖರೀದಿಸಲು ಪರಿಶೀಲಿಸಲಾಗಿ ಈಗಾಗಲೇ ರೂ. 6.50 ಲಕ್ಷಗಳ ಮಿತಿಯೊಳಗೆ ಹೊಸ ಕಾರನ್ನು ಖರೀದಿಸಲು ಅನುಮೋದನೆ ನೀಡಿರುವ ದಿನಾಂಕ 22.1.2015ರ ಆದೇಶವನ್ನು ಭಾಗಶಃ ಮಾರ್ಪಾಡಿಸಿ ಈ ಕೆಳಕಂಡಂತೆ ಆದೇಶಿಸಿದೆ.

### ಸರ್ಕಾರಿ ಆದೇಶ ಸಂಖ್ಯೆ: ಗ್ರಾಅಪ 385 ಕೆಎಸ್ಎಸ್ 2014 ಬೆಂಗಳೂರು ದಿನಾಂಕ 18.02.2015

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಮೈಸೂರು ಜಿಲ್ಲಾ ಪಂಚಾಯತ್ ಅಧ್ಯಕ್ಷರ ಉಪಯೋಗಕ್ಕಾಗಿ ಹೊಸ ಟೊಯೋಟಾ ಇನ್ನೋವಾ

ಕಾರನ್ನು ಖರೀದಿಸಲು ಹಾಗೂ ಅದರ ಖರೀದಿಯ ವೆಚ್ಚವನ್ನು ಲೆಕ್ಕ ಶೀರ್ಷಿಕೆ 2059–00–101–0–29ರ ಅಡಿಯಲ್ಲಿ ಲಭ್ಯವಿರುವ ಅನುದಾನದಲ್ಲಿ ವೆಚ್ಚವನ್ನು ಭರಿಸಿ ಖರೀದಿಸಲು, ಸರ್ಕಾರಿ ಆದೇಶ ಸಂಖ್ಯೆ: ಗ್ರಾಅಪ 385 ಕೆಎಸ್‌ಎಸ್ 2014 ದಿನಾಂಕ 22.01.2015 ಅನ್ನು ಭಾಗಶಃ ಮಾರ್ಪಾಡಿಸಿ, ಈ ಕೆಳಕಂಡ ಷರತ್ತಿಗೊಳಪಟ್ಟು ಸರ್ಕಾರದ ಅನುಮೋದನೆ ನೀಡಿದೆ.

1. ಹಳೆಯ ವಾಹನವನ್ನು ನಿಯಮಾನುಸಾರ ವಿಲೇವಾರಿ ಮಾಡಿ ಅದರಿಂದ ಬರುವ ಮೌಲ್ಯವನ್ನು ಸರ್ಕಾರಿ ಲೆಕ್ಕ ಶೀರ್ಷಿಕೆಗೆ ಜಮಾ ಮಾಡುವುದು.
2. ಸದರಿ ಹೊಸ ವಾಹನ ಖರೀದಿಸಲು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ ಹಾಗೂ ಅದರಡಿ ರಚಿಸಿರುವ ನಿಯಮಗಳನ್ನು ಪಾಲಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಅನಧಿಕೃತ ಟಿಪ್ಪಣಿ ಸಂಖ್ಯೆ: ಆಇ 358 ವೆಚ್ಚ–6/2014 ದಿನಾಂಕ 10.2.2015ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

18/2/15
(ಸಿದ್ಧಮಲ್ಲಪ್ಪ)
ಸರ್ಕಾರದ ಅಧೀನ ಕಾರ್ಯದರ್ಶಿ (ಪ್ರಭಾರ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಗೆ:

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯ್ತಿತ್, ಮೈಸೂರು
3. ಖಜಾನಾಧಿಕಾರಿ, ಜಿಲ್ಲಾ ಖಜಾನೆ, ಮೈಸೂರು
4. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು
5. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ/ ಕಾರ್ಯದರ್ಶಿ (ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು
6. ಅಪರ ಕಾರ್ಯದರ್ಶಿ (ಆಡಳಿತ), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಸಹಾಯಕರು.
7. ಮೇಲ್ವಿಚಾರಕರು, ಗಣಕ ಕೋಶ, ಗ್ರಾಅ ಮತ್ತು ಪಂ.ರಾಜ್ ಇಲಾಖೆ.
8. ಮಾಹಿತಿ ಕೇಂದ್ರ/ ಶಾಖಾ ರಕ್ಷಕ ಕಡತ / ಹೆಚ್ಚುವರಿ ಪ್ರತಿ.